ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 15–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | **World Food Day:**<br><br>**Inauguration:**<br><br>**Dr H. Shivanna,<br>Vice Chancellor,<br>University of Agriculture**<br><br>**Note:**<br><br>**Vehicle arrangements has been made from Press Club, Cubbon Park, Bengaluru at 10.30 AM on that day.**<br><br>**Contact:**<br><br>**Dr. L.Ramakrishna Rao,<br>Mob No. 9986663132** | **16–10–2015**<br>**Friday**<br>**at**<br>**11-00 AM** | **Staff Training Unit,<br>UAS, Hebbal,<br>Bengaluru** |
| 2. | ಪತ್ರಿಕಾಗೋಷ್ಠಿ:<br><br>ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ | **16–10–2015**<br>ಶುಕ್ರವಾರ<br>ಮಧ್ಯಾಹ್ನ<br>12–30 ಗಂಟೆಗೆ | ಕೊಠಡಿ ಸಂಖ್ಯೆ 419,<br>ನಾಲ್ಕನೇ ಮಹಡಿ,<br>ವಿಕಾಸಸೌಧ,<br>ಬೆಂಗಳೂರು |

| | | | |
|---|---|---|---|
| 3 | <u>ಪತ್ರಿಕಾಗೋಷ್ಠಿ:</u><br><br>ಶ್ರೀ ದಿನೇಶ್ ಗುಂಡೂರಾವ್,<br>ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು<br><br>ವಿ.ಸೂ.:<br>ಈ ಕಾರ್ಯಕ್ರಮಕ್ಕೆ ಬೆಂಗಳೂರು ಪ್ರೆಸ್‌ಕ್ಲಬ್ ಆವರಣದಿಂದ ಮಧ್ಯಾಹ್ನ 12-30 ಗಂಟೆಗೆ ವಾಹನ ವ್ಯವಸ್ಥೆ ಮಾಡಲಾಗಿದೆ. | 16-10-2015<br><br>ಶುಕ್ರವಾರ<br><br>ಮಧ್ಯಾಹ್ನ<br>1-00 ಗಂಟೆಗೆ | 2/106, 17ನೇ ಕ್ರಾಸ್,<br>ಕಾಸಿಯಾ ಸಭಾಂಗಣ,<br><br>ಮಾಗಡಿ ಕಾರ್ಡ್ ರಸ್ತೆ,<br><br>ವಿಜಯನಗರ<br><br>ಬೆಂಗಳೂರು -560 040 |

ನಿರ್ದೇಶಕರ ಪರವಾಗಿ

<u>**ಪತ್ರಿಕಾ ಪ್ರಕಟಣೆ**</u>

## <u>ಅವಧಿ ವಿಸ್ತರಣೆ</u>

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ 2015-16 ನೇ ಸಾಲಿನ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ಮತ್ತು ಮೆರಿಟ್-ಕಂ-ಮೀನ್ಸ್ ವಿದ್ಯಾರ್ಥಿ ವೇತನಕ್ಕೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅಕ್ಟೋಬರ್ 31 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್ www.golkdom.kar.nic.in ವಿಳಾಸ ಸಂಪರ್ಕಿಸಲು ಕೋರಿದೆ.

ಪಲ್ಲವಿ:ಬಾಬು:ಜಿಪಿಆರ್.

## <u>2014 ನೇ ಪುಸ್ತಕ ಬಹುಮಾನ ಯೋಜನೆಗೆ ಕೃತಿಗಳ ಆಹ್ವಾನ</u>

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಕರ್ನಾಟಕ ಜಾನಪದ ಅಕಾಡೆಮಿಯು 1-1-2014 ರಿಂದ ಡಿಸೆಂಬರ್ 31ರ ವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ ಕನಿಷ್ಠ 150 ಪುಟಗಳ ಮಿತಿಯಲ್ಲಿರುವ, ಜಾನಪದ ಗದ್ಯ, ಪದ್ಯ, ವಿಚಾರ-ವಿಮರ್ಶೆ, ಸಂಶೋಧನೆ ಹಾಗೂ ಸಂಕೀರ್ಣ ಈ ನಾಲ್ಕು ಪ್ರಕಾರಗಳ ಅತ್ಯುತ್ತಮ ಜಾನಪದ ಕೃತಿಗಳಿಗೆ 2014 ನೇ ಸಾಲಿನ ಪುಸ್ತಕ ಬಹುಮಾನ ನೀಡಲು ಅರ್ಹ ಕೃತಿಗಳನ್ನು ಆಹ್ವಾನಿಸಿದೆ.

ಲೇಖಕರು/ಪ್ರಕಾಶಕರು/ಸಂಪಾದಕರು ಕೃತಿಯ ನಾಲ್ಕು ಪ್ರತಿಗಳನ್ನು ದ್ವಿಪ್ರತಿ ಬಿಲ್ಲಿನೊಂದಿಗೆ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ. ಸಿ. ರಸ್ತೆ, ಬೆಂಗಳೂರು - 560 002 ಇವರಿಗೆ ಖುದ್ದಾಗಿ, ಕೋರಿಯರ್ ಅಥವಾ ಅಂಚೆ ಮೂಲಕ ಅಕ್ಟೋಬರ್ 30 ರೊಳಗೆ ತಲುಪುವಂತೆ ಕಳುಹಿಸಿಕೊಡಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯನ್ನು ಸಂಪರ್ಕಿಸಬಹುದು. ಕಚೇರಿ ದೂರವಾಣಿ ಸಂಖ್ಯೆ 080 - 22215509.

ಪಲ್ಲವಿ:ಬಾಬು:ಜಿಪಿಆರ್.

## ಭಾರಿ ವಾಹನ ತರಬೇತಿ

ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)

2015-16 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಕೌಶಲ್ಯ ಕಾರ್ಯಕ್ರಮದಡಿ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ನಿರುದ್ಯೋಗಿ ಮಹಿಳಾ/ಪುರುಷ ಅಭ್ಯರ್ಥಿಗಳಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವಿವಿಧ ತರಬೇತಿ ಸಂಸ್ಥೆಗಳ ಮೂಲಕ ಬೆಂಗಳೂರು, ಮಳವಳ್ಳಿ, ಹಾಸನ, ಹುಮನಾಬಾದ್, ಹಗರಿಬೊಮ್ಮನಹಳ್ಳಿ ಮತ್ತು ಹುಬ್ಬಳ್ಳಿಯಲ್ಲಿ ಉಚಿತ ಊಟ, ವಸತಿ ಹಾಗೂ ತರಬೇತಿ ಭತ್ಯೆಯೊಂದಿಗೆ ಒಂದು ತಿಂಗಳ ಅವಧಿಗೆ ಭಾರೀ ವಾಹನಾ ಚಾಲನಾ ತರಬೇತಿಯನ್ನು ನೀಡಲಾಗುವುದು. ಇಚ್ಛೆಯುಳ್ಳ ಪ್ರವರ್ಗ-1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯ ಕಚೇರಿಯಿಂದ ಪಡೆದು, ಭರ್ತಿಮಾಡಿದ ಅರ್ಜಿಯನ್ನು ನವೆಂಬರ್ 9 ರೊಳಗಾಗಿ ಅದೇ ಕಚೇರಿಗೆ ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.backwardclasses.kar.nic.in ಅನ್ನು ಸಂಪರ್ಕಿಸಬಹುದು.

ಪಲ್ಲವಿ:ಬಾಬು:ಜಿಪಿಆರ್.

## ಡಿ. ಇಡಿ.ಪರೀಕ್ಷಾ ಶುಲ್ಕ ಪಾವತಿ

ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)

ಡಿಸೆಂಬರ್ – 2015 ರ ಮಾಹೆಯ ಮೂರನೇ ವಾರದಲ್ಲಿ ನಡೆಯಲಿರುವ ಪ್ರಥಮ ಮತ್ತು ದ್ವಿತೀಯ ಡಿ.ಇಡಿ ಪೂರಕ ಪರೀಕ್ಷೆಗಳಿಗೆ ಸರ್ಕಾರಿ ಮತ್ತು ಮಾನ್ಯತೆ ಪಡೆದ ಡಿ.ಇಡಿ ತರಬೇತಿ ಸಂಸ್ಥೆಗಳಿಂದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿಸಲು ನವೆಂಬರ್ 19 ರವರೆಗೆ ಅವಧಿ ನೀಡಲಾಗಿದೆ. ನಿಗದಿತ ದಿನಾಂಕದೊಳಗೆ ಪರೀಕ್ಷಾ ಶುಲ್ಕ ಪಾವತಿಸುವಂತೆ ನಿರ್ದೇಶಕರು (ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಪ್ರಕಟಣೆ ತಿಳಿಸಿದೆ.

ಪಲ್ಲವಿ:ಬಾಬು:ಜಿಪಿಆರ್.

# D. Ed. EXAMINATION FEE

**Bangalore, October 15 (Karnataka Information)**

**I & II D.Ed Supplementary Exams will be held during the third week of December - 2015. The Director (Other Exams) Karnataka Secondary Education Examination Board, Bangalore has instructed the students to pay the fees on or before 19-11-2015.**

**pallavi:babu:gpr**